ಆ) ನಾರಾಯಣಪುರ ಬಲದಂಡೆ ಕಾಲುವೆಯ ಕಿ ಮೀ 95 00 ರಿಂದ ಮುಂದುವರೆದ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಸರ್ವೆ ತನಿಖಾ ಕಾರ್ಯ ಪ್ರಗತಿಯಲ್ಲಿದ್ದು, ಕಾಲುವೆ ಕಾಮಗರಿಯನ್ನು ಪ್ರಾರಂಭಿಸಿದ ನಂತರ ಗಣೇಕಲ್ ಜಲಾಶಯಕ್ಕೆ ಲಿಂಕ್ ಕೆನಾಲ್ ನಿರ್ಮಿಸುವ ಕುರಿತು ಪರಿಶೀಲಿಸಲಾಗುವುದು

1572 (1972) ಶ್ರೀ ಬೋಸರಾಜು ಎನ್ ಎಸ್ (ಮಾನ್ವಿ) – ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಂಗಭಧ್ರಾ ನದಿ ಮೇಲಿರುವ ಚೀಕಲಪರ್ವಿ ಗ್ರಾಮದ ಹತ್ತಿರ ನಿರ್ಮಿಸಲು ಉದ್ದೇಶಿಸಿರುವ ಬ್ಯಾಲೆನ್ಸಿಂಗ್ ರಿಸರ್ವ್‌ವಾಯರ್ (ಬ್ಯಾರೇಜ್) ಮಂಜೂರಾತಿಯಾಗಿದೆಯೇ,

ಆ) ಮಂಜೂರಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡು ಕ್ರಮವೇನು?

ಶ್ರೀ ಕೆ ಎಸ್ ಈಶ್ವರಪ್ಪ (ಜಲಸಂಪನ್ಮೂಲ ಸಚಿವರು)

ಅ) ಮಂಜೂರಾತಿ ಆಗಿರುವುದಿಲ್ಲ

ಆ) ಮೇಲ್ಕಂಡ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

1575 (1718) ಶ್ರೀ ಆರ್ ಧ್ರುವನಾರಾಯಣ (ಸಂತೇಮರಳ್ಳಿ) – ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಂತೇಮರಹಳ್ಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಕುದೇರು ಗ್ರಾಮದಲ್ಲಿ ಪ್ರಥಮ ದರ್ಜೆ ಕಾಲೇಜು ತೆರೆಯುವ ಉದ್ದೇಶ ಸರ್ಕಾರಕ್ಕಿದೆಯೇ,

ಆ) ಡಾ॥ ನಂಜುಂಡಪ್ಪನವರ ವರದಿಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಗಮನದಲ್ಲಿದೆಯೇ,

ಇ) ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಡಿ ಹೆಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಸರ್ಕಾರದ ಪರಿಶೀಲನೆಯಲ್ಲಿದೆ